## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಂಖ್ಯೆ: ವಾರ್ಡ್ ಸಂಖ್ಯೆ 10/ಸಭೆ/ಪಿಆರ್/29/2021-22** **ದಿನಾಂಕ: 18/12/2021.**

ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21, ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ. 10 ದೊಡ್ಡಬೊಮ್ಮಸಂದ್ರ ವಾರ್ಡ್ ಕಛೇರಿಯಲ್ಲಿ ದಿನಾಂಕ: 18/12/2021 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದ ಅಧಿಕಾರಿ/ಸದಸ್ಯರು**

1. ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ಹಾಗೂ ಸ.ಕಾ.ಅ, ಕೊಡಿಗೇಹಳ್ಳಿ ಉಪವಿಭಾಗ
2. ಶ್ರೀಮತಿ. ಶ್ವೇತಾ ಎನ್.ಆರ್, ಸಹಾಯಕ ಅಭಿಯಂತರರು
3. ಶ್ರೀ ಮಂಜುನಾಥ್, ಕಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ. ಪ್ರವೀಣ್, ಹಿರಿಯ ಆರೋಗ್ಯ ಪರಿವೀಕ್ಷಕರು
5. ಬಿಬಿಎಂಪಿ ಕಂದಾಯ ಇಲಾಖೆ ಅಧಿಕಾರಿಗಳು
6. ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
7. ಶ್ರೀಮತಿ. ಬೇಬಿರಾಣಿ, ಸದಸ್ಯರು
8. ಶ್ರೀ ಎಂ. ಶ್ರೀನಿವಾಸ್, ಸದಸ್ಯರು
9. ಶ್ರೀ. ಗೋಪಾಲಕೃಷ್ಣ, ಸದಸ್ಯರು,
10. ಶ್ರೀ. ಮಾಲಾದ್ರಿ, ಸದಸ್ಯರು.
11. ಶ್ರೀ. ಪಿಳ್ಳಪ್ಪ, ಸದಸ್ಯರು.
12. ಶ್ರೀ. ಪ್ರಕಾಶ್, ಸದಸ್ಯರು.

**ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿ ಹಿಂದಿನ ಸಭೆಯ ನಡವಳಿಯನ್ನು ಸಭೆಯಲ್ಲಿ ಓದಿ, ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**<u>ದಿನಾಂಕ: 18-12-2021 ರ ಸಭೆಯ ನಡಾವಳಿಗಳು:</u>**

**ಶ್ರೀಮತಿ ಡಾ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ:-**

- ಓಮಿಕ್ರಾನ್ ಸಾಂಕ್ರಾಮಿಕ ರೋಗವು ಹರಡುತ್ತಿರುವುದರಿಂದ ಸಾರ್ವಜನಿಕರು ಬಹಳ ಎಚ್ಚರಿಕೆಯಿಂದ ಇದ್ದು, ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸಿ, ಮಾಸ್ಕ್ ಹಾಗೂ ಸ್ಯಾನಿಟೈಜರ್ ಉಪಯೋಗಿಸುವಂತೆ ಸಾರ್ವಜನಿಕರಿಗೆ ತಿಳುವಳಿಕೆ ನೀಡಿದರು. ಹಾಗೂ ವಿದೇಶದಿಂದ ಯಾವುದೇ ಪ್ರಯಾಣಿಕರು ಅಥವಾ ಕೇರಳ, ಮಹಾರಷ್ಟ್ರಾ ರಾಜ್ಯಗಳಿಂದ ಜನರು ಬಂದಿದ್ದಲ್ಲಿ ಆರೋಗ್ಯ ಇಲಾಖೆ ಸಿಬ್ಬಂಧಿಗೆ ತಿಳಿಸಿ ಪರೀಕ್ಷೆ ನಡೆಸಲು ಸಹಕರಿಸುವಂತೆ ಸಾರ್ವಜನಿಕರಲ್ಲಿ ಕೋರಿರುತ್ತಾರೆ.
- ಪ್ರಸ್ತುತ ಪಾಲಿಕೆಯ ಆರೋಗ್ಯ ಸಿಬ್ಬಂಧಿಗಳು ಮನೆಮನೆಗೆ ಬೇಟಿ ನೀಡಿ ವ್ಯಾಕ್ಸಿನೇಷನ್ ಹಾಕಿಸಿಕೊಳ್ಳಲು ತಿಳುವಳಿಕೆ ನೀಡುತ್ತಿದ್ದರು, ಸಾರ್ವಜನಿಕರು ಸ್ಪಂದಿಸದಿರುವ ಬಗ್ಗೆ ಸಭೆಗೆ ತಿಳಿಸಿ, ಸಾರ್ವಜನಿಕರು ವ್ಯಾಕ್ಸಿನೇಷನ್ ಹಾಕಿಸಿಕೊಳ್ಳಲು ಅಗತ್ಯ ತಿಳುವಳಿಕೆ ನೀಡಲು ಸಭೆಯಲ್ಲಿ ನೆರೆದಿದ್ದ ಸದಸ್ಯರುಗಳಿಗೆ ಹಾಗೂ ಸಾರ್ವಜನಿಕರಿಗೆ ವೈದ್ಯಾಧಿಕಾರಿಗಳು ತಿಳಿಸಿದರು.
- ವಾರ್ಡ್ ಸಂಖ್ಯೆ: 10 ರಲ್ಲಿ ಪ್ರಸ್ತುತ 9 ಓಮ್ಮೆಕ್ರಾನ್ ಪ್ರಕರಣಗಳು ಪತ್ತೆಯಾಗಿದ್ದು, ಸಾರ್ವಜನಿಕರು ಮತ್ತು ವಾರ್ಡಿನ ನಿವಾಸಿಗಳು ಹೆಚ್ಚಿನ ಜಾಗೃತೆಯನ್ನು ವಹಿಸಲು ವೈದ್ಯಾಧಿಕಾರಿಗಳು ಸೂಚಿಸಿರುತ್ತಾರೆ.

**ಬೋರ್‌ವೆಲ್‌ಗಳ ದುರಸ್ಥಿ ಕೈಗೊಳ್ಳುವ ಬಗ್ಗೆ:**

- ದೊಡ್ಡಬೊಮ್ಮಸಂದ್ರ ವ್ಯಾಪ್ತಿಯಲ್ಲಿ ಈ ಕೆಳಕಂಡ ಬಡಾವಣೆಗಳಲ್ಲಿ ಬೋರ್‌ವೆಲ್ ಪ್ಯಾನಲ್ ಬೋರ್ಡ್‌ಗಳು ಹಾಳಾಗಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುತ್ತದೆ. ಆದ್ದರಿಂದ ಈ ಕೆಳಕಂಡ ಬಡಾವಣೆಗಳಲ್ಲಿರುವ ಬೋರ್‌ವೆಲ್ ಪ್ಯಾನಲ್‌ಗಳನ್ನು ಕೂಡಲೇ ದುರಸ್ಥಿ ಮಾಡಲು ಸಾರ್ವಜನಿಕರು ಕೋರಿರುತ್ತಾರೆ.
    1. ಕಾಳೇರಮ್ಮ ದೇವಸ್ಥಾನದ ರಸ್ತೆ
    2. ಕಲ್ಪವೃಕ್ಷ ಬಡಾವಣೆ
    3. ಚಾಮುಂಡೇಶ್ವರಿ ಬಡಾವಣೆ
    4. ಪಟೇಲ್ ಪಿಳ್ಳೇಗೌಡ
    5. ಮರಿಯಮ್ಮ ದೇವಸ್ಥಾನ (ಹನುಮಂತಪ್ಪನ ಮನೆ ಹತ್ತಿರ)

**ಕ್ರಮ:** ಬಿ.ಡಬ್ಲ್ಯೂ.ಎಸ್.ಎಸ್.ಬಿ. ಇಲಾಖೆಯ ಬೋರ್‌ವೆಲ್ ವಿಭಾಗದ ಅಧಿಕಾರಿಗಳಿಗೆ ಕೂಡಲೇ ಕ್ರಮಕೈಗೊಂಡು ದುರಸ್ಥಿಪಡಿಸಲು ಕ್ರಮಕೈಗೊಳ್ಳುವುದಾಗಿ ತಿಳಿಸಿರುತ್ತಾರೆ.

ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

ನೋಡೆಲ್ ಅಧಿಕಾರಿ ವಾರ್ಡ್-10 ಹಾಗೂ ಸಹಾಯಕ
ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

<u>ಪ್ರತಿಯನ್ನು:</u>

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿ ಆಯುಕ್ತರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯ ಅಭಿಯಂತರರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
5. ಆರೋಗ್ಯ ವೈದ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರಿಗೆ ಸಲ್ಲಿಸಿ ಸಭೆಗೆ ಹಾಜರಾಗಲು ಕೋರಿದೆ.
6. ಸಹಾಯಕ ಕಂದಾಯ ಅಧೀಕಾರಿಗಳು, ಕಂದಾಯ ವಿಭಾಗ, ವಿದ್ಯಾರಣ್ಯಪುರ ವಿಭಾಗ ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿದ್ಯಾರಣ್ಯಪುರ ವಿಭಾಗ ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೀದಿ ದೀಪಗಳ ನಿರ್ವಹಣೆ, ಯಲಹಂಕ ವಲಯ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ, ಯಲಹಂಕ ವಲಯ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಯಲಹಂಕ ವಲಯ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ಯಲಹಂಕ ವಲಯ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
12. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಸಂಚಾರ) ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಲಾ ಮತ್ತು ಆರ್ಡರ್) ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
14. ಕಛೇರಿ ಕಡತಕ್ಕೆ.